ಸಾಕ್ಷಿಯನ್ನು ದಿಃ 12-08-2026 ರಂದು ಪುನಃ ಕರೆಯಿಸಿ ಸತ್ಯ ಪ್ರತಿಜ್ಞೆ ಮಾಡಲಾಯಿತು.

**ಮುಖ್ಯ ವಿಚಾರಣೆಃ ಶ್ರೀ ಎಮ್ ಪಿ ಟಿ ವಕೀಲರಿಂದಃ (3 ನೇ ಎದುರುದಾರ ಪರ )**

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಸಲ್ಲಿಸಿದ್ದು, ಅದರಲ್ಲಿರುವ ಎಲ್ಲ ವಿಷಯಗಳನ್ನು ನಾನೇ ಹೇಳಿ ಬರೆಯಿಸಿದ್ದು, ಸದರಿ ವಿಷಯಗಳು ಸರಿಯಾಗಿದ್ದು, ಸತ್ಯವಾಗಿರುತ್ತವೆ ಎಂದು ಪ್ರಮಾಣಿಕರಿಸುತ್ತೇನೆ.

ಅಧಿಕಾರ ಪತ್ರ ನಿಆರ್ 1 ಎಂದು ಗುರುತಿಸಿದೆ.

ಕಾರಣ ಅರ್ಜಿಯನ್ನು ವಜಾಗೊಳಿಸಲು ವಿನಂತಿಸಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಶ್ರೀಮತಿ ಪಿ ಹೆಚ್ ಎಮ್ ವಕೀಲರಿಂದ (ಅರ್ಜಿದಾರರ ಪರವಾಗಿ)**

ಅಪಘಾತದ ಸಮಯದಲ್ಲಿ ವಾಹನ ವಿಮೆಗೆ ಒಳಪಟ್ಟಿತ್ತು ಎಂದರೆ ಸರಿ. ವಿಮಾ ಪಾಲಿಸಿ ಚಾಲ್ತಿ ಇತ್ತು ಎಂದರೆ ಸರಿ. ಅಪಘಾತದ ಬಗ್ಗೆ ನನಗೆ ವೈಯಕ್ತಿಕ ಮಾಹಿತಿ ಇಲ್ಲ. ದಾಖಲೆಗಳ ಆಧಾರದ ಮೇಲೆ ಸಾಕ್ಷಿ ನುಡಿಯುತ್ತಿದ್ದೇನೆ. ಅಪಘಾತದ ನಂತರ 6-7 ತಿಂಗಳು ಅರ್ಜಿದಾರ ಚಿಕಿತ್ಸೆ ಪಡೆಯುತ್ತಿದ್ದುದ್ದರಿಂದ ಅರ್ಜಿ ಸಲ್ಲಿಸಲು ವಿಳಂಬವಾಗಿದೆ ಎಂದರೆ ಸರಿಯಲ್ಲ. ಅಪಘಾತದಿಂದಾದ ಗಾಯದಿಂದಾಗಿ ಅರ್ಜಿದಾರನಿಗೆ ಕೆಲಸ ಮಾಡಲು ಆಗುತ್ತಿಲ್ಲ ಹಾಗಾಗಿ ಆತನ ಸಂಬಳ ಮತ್ತು ಭವಿಷ್ಯದ ಆದಾಯಕ್ಕೆ ತೊಂದರೆಯಾಗಿದೆ ಎಂದರೆ ಅದನ್ನು ಸಿದ್ಧಪಡಿಸುವುದು ಅರ್ಜಿದಾರರಿಗೆ ಬಿಟ್ಟಿದ್ದು ಎಂದು ಹೇಳುತ್ತಾರೆ. ಅರ್ಜಿದಾರನ ತಪ್ಪಿನಿಂದ ಅಪಘಾತ ಆಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಾಹನ ಸಂಖ್ಯೆ ಕೆ ಎ 29-ಪಿ-2513 ರ ಚಾಲಕನ ತಪ್ಪಿನಿಂದ ಅಪಘಾತ ಆಗಿದೆ ಎಂದು ದೋಷಾರೋಪಣಾ ಪಟ್ಟಿ ದಾಖಲಿಸಲಾಗಿದೆ ಎಂದರೆ ಸರಿ. ವಿಮಾ ಪಾಲಿಸಿ ಚಾಲ್ತಿ ಇರುವ ಕಾರಣ ಅರ್ಜಿದಾರರಿಗೆ ಪರಿಹಾರ ನೀಡಲು ವಿಮಾ ಸಂಸ್ಥೆ ಬಾಧ್ಯಸ್ಥ ಎಂದರೆ ಸರಿಯಲ್ಲ. ಪರಿಹಾರ ನೀಡುವ ಜವಾಬ್ದಾರಿಯಿಂದ ಸುಳ್ಳು ತಕರಾರು ಸಲ್ಲಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

(1 ಮತ್ತು 2 ನೇ ಎದುರುದಾರರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ)

**<u>ಮರು ವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ.

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ಗದಗ.